## ಕೃಷಿ ಇಲಾಖೆಯಲ್ಲಿನ ನೇಮಕಾತಿ – ಮೂಲ ದಾಖಲಾತಿ ಪರಿಶೀಲನೆ – ಸೂಚನೆಗಳು

1. ಸಹಾಯಕ ಕೃಷಿ ನಿರ್ದೇಶಕರು, ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿಗಳ ಹುದ್ದೆಗಳ ನೇಮಕಾತಿ ಮುಂದಿನ ಪ್ರಕ್ರಿಯೆ ಸಂಬಂಧ, ಮೂಲ ದಾಖಲೆಗಳ ಪರಿಶೀಲನೆಯನ್ನು ದಿನಾಂಕ 23-02-2018 ಮತ್ತು 24-02-2018 ರಂದು ನಡೆಸಲು ವೇಳಾಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ.
2. ಅಭ್ಯರ್ಥಿಗಳು ನಿಗದಿಪಡಿಸಿದ ದಿನಾಂಕದಂದು ಎಲ್ಲಾ ಮೂಲ ದಾಖಲಾತಿಗಳೊಂದಿಗೆ ದಾಖಲೆಗಳ ಪರಿಶೀಲನೆಗೆ ಹಾಜರಾಗಲು ಸೂಚಿಸಿದೆ. ಪರಿಶೀಲನೆಗೆ ಹಾಜರು ಪಡಿಸಬೇಕಾಗಿರುವ ದಾಖಲೆಗಳ ವಿವರ ಮತ್ತು ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಅನ್ನು ನೋಡಲು ಕೋರಿದೆ.
3. ಅಭ್ಯರ್ಥಿಗಳು ಅರ್ಜಿ ನಮೂನೆಯಲ್ಲಿ ಕ್ಲೇಮ್ ಮಾಡಿರುವ ಮೀಸಲಾತಿಗಳಿಗನುಗುಣವಾಗಿ ಸಂಬಂಧಿಸಿದ ಮೂಲ ದಾಖಲಾತಿ / ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು.
4. ಎಸ್.ಸಿ. / ಎಸ್.ಟಿ. ಮೀಸಲಾತಿಯನ್ನು ಕ್ಲೇಮ್ ಮಾಡಿರುವ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ **09.03.2017 ರೊಳಗಾಗಿ ಪಡೆದಿರುವ** ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.
5. 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಯನ್ನು ಕ್ಲೇಮ್ ಮಾಡಿರುವ ಅಭ್ಯರ್ಥಿಗಳು ನಮೂನೆ 'ಎಫ್' ಯಲ್ಲಿ **09.03.2017 ರೊಳಗಾಗಿ ಪಡೆದಿರುವ** ಜಾತಿ / ಆದಾಯ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. (ಪಡೆದಿರುವ ಜಾತಿ ಆದಾಯ ಪ್ರಮಾಣ ಪತ್ರದ ಅವಧಿ ದಿನಾಂಕ 09-03-2017 ಕ್ಕೆ ಚಾಲ್ತಿಯಲ್ಲಿರಬೇಕು – The caste / income certificate obtained should be valid as on the last date fixed for receipt / submission of application – i.e., 09-03-2017)
6. 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಯನ್ನು ಕ್ಲೇಮ್ ಮಾಡಿರುವ ಅಭ್ಯರ್ಥಿಗಳು ನಮೂನೆ 'ಎಫ್' ಪಡೆದಿರುವ ಪ್ರಮಾಣ ಪತ್ರದಲ್ಲಿ ಒಂದು ವರ್ಷದ ಅವಧಿಗೆ ಮಾತ್ರ ಎಂದು ನಮೂದಿಸಿದ್ದಲ್ಲಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ **09.03.2017 ಕ್ಕೆ** ಪ್ರಮಾಣ ಪತ್ರವು ಒಂದು ವರ್ಷವನ್ನು ಪೂರೈಸಿರಬಾರದು.
7. ಪ್ರವರ್ಗ-1 ಮೀಸಲಾತಿಯನ್ನು ಕ್ಲೇಮ್ ಮಾಡಿರುವ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ **09.03.2017 ರೊಳಗಾಗಿ ಪಡೆದಿರುವ** ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.
8. ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳು ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ ಅಂದರೆ **09.03.2017 ರೊಳಗಾಗಿ ಪಡೆದಿರಬೇಕು.**
9. 2ಎ, 2ಬಿ, 3ಎ ಮತ್ತು 3ಬಿ ಕ್ಲೇಮ್ ಮಾಡಿರುವ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿಯನ್ನು ಸಹ ನಮೂದಿಸಿದ್ದರೆ, ಗ್ರಾಮೀಣ ವ್ಯಾಸಂಗ ಪ್ರಮಾಣ ಪತ್ರ ವನ್ನು ಜಾತಿ ಆದಾಯ ಪ್ರಮಾಣ ಪತ್ರದೊಂದಿಗೆ ಸಲ್ಲಿಸಬೇಕು. ಒಂದು ವೇಳೆ 2ಎ, 2ಬಿ, 3ಎ ಮತ್ತು 3ಬಿ ಕ್ಲೇಮ್ ರದ್ದಾದರೆ, ಅಂತಹ 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು ಸಾಮಾನ್ಯ ಅಭ್ಯರ್ಥಿಗಳು ಸಲ್ಲಿಸುವಂತೆ ಗ್ರಾಮೀಣ ವ್ಯಾಸಂಗ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ಸಲ್ಲಿಸಬೇಕು.
10. ಅಭ್ಯರ್ಥಿಗಳು ಮೂಲ ದಾಖಲಾತಿ ಪರಿಶೀಲನೆಗೆ ನಿಗದಿಪಡಿಸಿರುವ ದಿನಾಂಕದಂದು ಕಡ್ಡಾಯವಾಗಿ ಎಲ್ಲಾ ಅಗತ್ಯ ಮೂಲ ದಾಖಲಾತಿಗಳೊಂದಿಗೆ ದಾಖಲಾತಿ ಪರಿಶೀಲನೆಗೆ ಹಾಜರಾಗಬೇಕು ಇಲ್ಲದಿದ್ದಲ್ಲಿ ಯಾವುದೇ ಸಂದರ್ಭದಲ್ಲಿ ದಾಖಲಾತಿ ಪರಿಶೀಲನೆಗೆ ಅವಕಾಶವಿರುವುದಿಲ್ಲ.
11. ವಿಕಲಚೇತನ ಅಭ್ಯರ್ಥಿಗಳು ವೈದ್ಯಕೀಯ ತಪಾಸಣೆಗೆ ಅಗತ್ಯ ದಾಖಲೆಗಳೊಂದಿಗೆ ನಿಗದಿಪಡಿಸಿರುವ ದಿನಾಂಕದಂದು ವೈದ್ಯಕೀಯ ಸಮಿತಿಯ ಮುಂದೆ ಹಾಜರಾಗಬೇಕು ಇಲ್ಲದಿದ್ದಲ್ಲಿ ಯಾವುದೇ ಸಂದರ್ಭದಲ್ಲಿ ವೈದ್ಯಕೀಯ ತಪಾಸಣೆಗೆ ಅವಕಾಶ ನೀಡುವುದಿಲ್ಲ.

ದಿನಾಂಕ: 20-02-2018

ಕಾರ್ಯನಿರ್ವಾಹಕ ನಿರ್ದೇಶಕರ ಪರವಾಗಿ. 20/2/18